# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ವಿಕ್ರಮ್ ಶ್ರೀರಾಮ ಇವರಿಗೆ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಭರಚುಕ್ಕಿ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆ.ಆರ್.ಇ.ಡಿ./06/SH-837/Barachukki MHS/2012/146 ದಿನಾಂಕ: 04.01.2013
2. ದಿನಾಂಕ: 11.3.2013ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರಗಳಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ವಿಕ್ರಮ್ ಶ್ರೀರಾಮ್ ರವರಿಗೆ ಚಾಮರಾಜನಗರ ಜಿಲ್ಲೆಯ ಕೊಳ್ಳೆಗಾಲ ತಾಲ್ಲೂಕಿನ ಶಿವನಸಮುದ್ರಂ ಗ್ರಾಮದ ಸಮೀಪದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಭರಚುಕ್ಕಿ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆಗಾಗಿ ತಾಂತ್ರಿಕ ಮಾಹಿತಿಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ: ವಿಕ್ರಮ್ ಶ್ರೀರಾಮ್ ರವರಿಗೆ ಚಾಮರಾಜನಗರ ಜಿಲ್ಲೆಯ ಕೊಳ್ಳೆಗಾಲ ತಾಲ್ಲೂಕಿನ ಶಿವನಸಮುದ್ರಂ ಗ್ರಾಮದ ಸಮೀಪದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಬರಚುಕ್ಕಿ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು ಸಮಿತಿಯು ಕೂಲಂಕಷವಾಗಿ ಪರಿಶೀಲಿಸಿ, ಈಗಾಗಲೇ ಕೆಳತೊರೆಯಲ್ಲಿ ಹಂಚಿಕೆಯಾಗಿರುವ ಮೆ: ವಿಜಯ ಗ್ರೀನ್ ಪವರ್ ಪ್ರೈ.ಲಿ., ರವರ ಯೋಜನೆಗೆ ದಕ್ಕೆ ಬಾರದಂತೆ ಅನುಷ್ಠಾನಗೊಳಿಸಬೇಕೆಂಬ ಷರತ್ತಿಗೊಳಪಟ್ಟು ಯೋಜನೆಯ ಹಂಚಿಕೆಗೆ ಅನುಮೋದಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ :-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 20 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 21.05.2013.**

ಮೆ: ವಿಕ್ರಮ್ ಶ್ರೀರಾಮ್ ರವರಿಗೆ ಚಾಮರಾಜನಗರ ಜಿಲ್ಲೆಯ ಕೊಳ್ಳೆಗಾಲ ತಾಲ್ಲೂಕಿನ ಶಿವನಸಮುದ್ರಂ ಗ್ರಾಮದ ಸಮೀಪದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಬರಚುಕ್ಕಿ ಕಿರು ಜಲ ವಿದ್ಯುತ್ ಯೋಜನೆಯನ್ನು ಈಗಾಗಲೇ ಕೆಳತೊರೆಯಲ್ಲಿ ಹಂಚಿಕೆಯಾಗಿರುವ ಮೆ: ವಿಜಯ ಗ್ರೀನ್ ಪವರ್ ಪ್ರೈ.ಲಿ., ರವರ ಯೋಜನೆಗೆ ದಕ್ಕೆ ಬಾರದಂತೆ ಈ ಕೆಳಗಿನ ಭೌಗೋಳಿಕ ಸ್ಥಳದಲ್ಲಿ ಅನುಷ್ಠಾನಗೊಳಿಸುವ ಹಾಗೂ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ :-

| | Latitude | Longitude |
|---|---|---|
| Weir | 12°16'59.24''N | 77°10'34.65 ''E |
| Power House | 12°17'33''N | 77°10'58.27 ''E |
| FRL | EL 588 M | |
| TWL | EL 526M | |

.....2

1 ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ 17.8.2011ರಲ್ಲಿ ನೀಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

2 ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ :ಇಎನ್ 435 ಎನ್‌ಸಿಇ 2011 ದಿನಾಂಕ : 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆ ತಂತಾನೇ ರದ್ದಾಗುವುದು. ನಂತರ, ಕಂಪನಿಯು ಹಂಚಿಕೆಗೋಸ್ಕರ ಪುನಃ ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು. ಯಾವ ಕಾರಣಕ್ಕೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ಸ್ವೀಕರಿಸಿದ ಅರ್ಜಿ ಪರಿಷ್ಕರಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.

3 ಸದರಿ ಯೋಜನೆಯಿಂದ ಕೆಳತೊರೆ ಮತ್ತು ಮೇಲ್ತೊರೆ ಯೋಜನೆಗಳಿಗೆ ಯಾವುದೇ ಹಾನಿಯಾಗಬಾರದು.

4 ಈ ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್) ಪರಿಷ್ಕರಿಸಲು ಮೆಗಾ ವ್ಯಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣಾ ಶುಲ್ಕವನ್ನು ತುಂಬುವುದು.

5 ಯೋಜನಾ ಅಭಿವೃದ್ಧಿದಾರರು ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಂದಲೂ ಅಂದರೆ ಜಲ ಸಂಪನ್ಮೂಲ ಇಲಾಖೆ, ಅರಣ್ಯ, ಜೀವಿಶಾಸ್ತ್ರ & ಪರಿಸರ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಕಂದಾಯ ಇಲಾಖೆಗಳಿಂದ ಕ್ಲಿಯರೆನ್ಸ್ ಪಡೆಯತಕ್ಕದ್ದು. ಒಡಂಬಡಿಕೆ ಮಾಡಿಕೊಂಡ ಒಂದು ವರ್ಷದೊಳಗಾಗಿ ವಿವರವಾದ ಯೋಜನಾ ವರದಿಯನ್ನು ಸಲ್ಲಿಸತಕ್ಕದ್ದು.

6 ಹಂಚಿಕೆದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಠೇವಣಿ ಇಡುವ ಹಣವನ್ನು, ವಿವರವಾದ ಯೋಜನಾ ವರದಿಯನ್ನು (ಡಿಪಿಆರ್) ಆವಿಷ್ಕರಿಸುವುದಕ್ಕೋಸ್ಕರ ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

7 ಯೋಜನಾ ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಗಳನುಸಾರ ವಿದ್ಯುತ್ ಖರೀದಿ ಒಡಂಬಡಿಕೆ (ಪಿಪಿಎ) ಮಾಡಿಕೊಳ್ಳತಕ್ಕದ್ದು.

8 ಈ ಕಿರು ಜಲ ವಿದ್ಯುತ್ ಯೋಜನೆಯ ಸ್ಥಳದಲ್ಲಿ ಯಾವುದಾದರು ಸರ್ಕಾರಿ ಜಲ ವಿದ್ಯುತ್ ನೀರಾವರಿ/ಕುಡಿಯುವ ನೀರಿನ ಯೋಜನೆಗಳು ಬಂದಲ್ಲಿ ಸರ್ಕಾರಿ ಯೋಜನೆಗಳಿಗೆ ಮೊದಲ ಆದ್ಯತೆ ದೊರಕುವುದು ಹಾಗೂ ಈ ಯೋಜನೆಗೆ ಯಾವುದಾದರೂ ಇತರೆ ಯೋಜನೆಗಳಿಂದ ಧಕ್ಕೆಯಾದ್ದಲ್ಲಿ ಯಾವುದೇ ಪರಿಹಾರವನ್ನು ಅಭಿವೃದ್ಧಿದಾರರು ನಿರೀಕ್ಷಿಸುವಂತಿಲ್ಲ.

9 ಸ್ಥಳೀಯವಾಗಿ ಉದ್ಭವಿಸುವ ಯಾವುದಾದರೂ ಆಕ್ಷೇಪಣೆಗಳಿಗೆ ಅಭಿವೃದ್ಧಿದಾರರೇ ಸಂಪೂರ್ಣವಾಗಿ ಹೊಣೆಗಾರರಾಗಿರುತ್ತಾರೆ.

10 ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ಅಥವಾ ಸರ್ಕಾರದ ಯಾವುದೇ ಯೋಜನೆಗಳಿಂದಾಗಿ ಸದರಿ ಯೋಜನೆಯು ಮುಳುಗಡೆಯಾದಲ್ಲಿ, ಒದಗಬಹುದಾದ ಸಂಪೂರ್ಣ ತೊಂದರೆಗಳಿಗೆ ಅಭಿವೃದ್ಧಿದಾರರೇ ಪೂರ್ಣ ಜವಾಬ್ದಾರರಾಗಿರುತ್ತಾರೆ.

11 ವಿವರವಾದ ಯೋಜನಾ ವರದಿಯನ್ನು ಕ್ರೆಡಲ್ ಸಂಸ್ಥೆಯು ಪರಿಶೀಲಿಸಿದ ನಂತರ ಇತರ ಸಂಬಂಧಿಸಿದ ಇಲಾಖೆಗಳಿಗೆ ಡಿ.ಪಿ.ಆರ್. ಸಲ್ಲಿಸುವುದು ಹಾಗೂ ತದನಂತರ ತಾಂತ್ರಿಕ ಅನುಮೋದನೆಗಾಗಿ ಕ್ರೆಡಲ್‌ಗೆ ಅರ್ಜಿ ಸಲ್ಲಿಸತಕ್ಕದ್ದು.

......

12 ಈ ಯೋಜನೆಯನ್ನು ಅನುಷ್ಠಾನಗೊಳಿಸಿ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡದ ಹೊರತು ವರ್ಗಾವಣೆ ಪ್ರಸ್ತಾವನೆಯನ್ನು ಪರಿಗಣಿಸುವುದಿಲ್ಲ.

13 ಸರ್ಕಾರಿ ಆದೇಶ ಸಂ: ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು

14 ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ :**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಮತ್ತು ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ಉಪ ಅರಣ್ಯ ಸಂರಕ್ಷಣಾಧಿಕಾರಿ ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
7 ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ,
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಹುಬ್ಬಳ್ಳಿ.
9 M/s Vikram Sreeram Mallige, 31, Crescent Road, Bangalore 560001.
10 ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.